ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು–560001.**

ಸಂಖ್ಯೆ: ಸಿ3(7)ನಿ.ಹು.ಅ.ಪ.19/2019–20 ದಿನಾಂಕ:29.11.2019 30

## –: ಅಧಿಕೃತ ಜ್ಞಾಪನ :–

ವಿಷಯ:– 2019ರಲ್ಲಿ ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕ ವೃಂದದ ಸಿಆರ್‌ಪಿ/ಬಿಆರ್‌ಪಿ/ಶಿಕ್ಷಣ ಸಂಯೋಜಕ, ಈ ನಿರ್ದಿಷ್ಟ ಹುದ್ದೆಗಳನ್ನು ಲಿಖಿತ ಪರೀಕ್ಷೆ ನಡೆಸುವ ಮೂಲಕ ಭರ್ತಿ ಮಾಡುವ ಬಗ್ಗೆ

ಉಲ್ಲೇಖ:– 1] ಈ ಕಛೇರಿ ಜ್ಞಾಪನ ಸಂಖ್ಯೆ:ಸಿ3(7)ನಿ.ಹು.ಅ.ಪ :19/2019–20 ದಿನಾಂಕ:03.10.2019
2] ಈ ಕಛೇರಿ ಜ್ಞಾಪನ ಸಂಖ್ಯೆ:ಸಿ3(7)ನಿ.ಹು.ಅ.ಪ :19/2019–20 ದಿನಾಂಕ:22.11.2019

*********************

ವಿಷಯದನ್ವಯ ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕ ವೃಂದದ ಸಿಆರ್‌ಪಿ/ಬಿಆರ್‌ಪಿ/ಶಿಕ್ಷಣ ಸಂಯೋಜಕ, ಈ ನಿರ್ದಿಷ್ಟ ಹುದ್ದೆಗಳನ್ನು ಲಿಖಿತ ಪರೀಕ್ಷೆ ಮೂಲಕ ಭರ್ತಿ ಮಾಡುವ ಪ್ರಕ್ರಿಯೆಗೆ ಉಲ್ಲೇಖಿತ ಜ್ಞಾಪನದಲ್ಲಿ ಮಾರ್ಗಸೂಚಿ ಮತ್ತು ವೇಳಾಪಟ್ಟಿಯನ್ನು ನಿಗದಿಪಡಿಸಲಾಗಿದೆ. ಸದರಿ ಮಾರ್ಗಸೂಚಿ ಹಾಗೂ ವೇಳಾಪಟ್ಟಿಗನುಸಾರವಾಗಿ ಆಯಾ ಕಾರ್ಯಗಳು ಯಥಾವತ್ತಾಗಿ ಜರುಗಬೇಕಾಗಿದೆ. ಈ ನಿಟ್ಟಿನಲ್ಲಿ ಜಿಲ್ಲಾ ಹಂತದಲ್ಲಿ ಕೆಳಗಿನಂತೆ ವಿಷಯದ ಕುರಿತಾಗಿ ಶಿಕ್ಷಕ ವಲಯದಲ್ಲಿ ವ್ಯಾಪಕವಾಗಿ ಪ್ರಚುರಗೊಳಿಸಲು ಕ್ರಮಗಳನ್ನು ಕೈಗೊಳ್ಳತಕ್ಕದ್ದು.

1. ಈಗಾಗಲೇ ಇಲಾಖಾ ವೆಬ್‌ಸೈಟ್‌ನಲ್ಲಿ ಉಲ್ಲೇಖಿತ ಜ್ಞಾಪನಗಳನ್ನು ಪ್ರಕಟಿಸಲಾಗಿದ್ದು ಸ್ಥಳೀಯ ಪತ್ರಿಕೆಗಳಲ್ಲಿಯೂ ಸಹ ಈ ಬಗ್ಗೆ ಆಯಾ ಉಪನಿರ್ದೇಶಕರು ಸುದ್ದಿಯಂತೆ ವ್ಯಾಪಕವಾಗಿ ಪ್ರಚುರಪಡಿಸಲು ಕ್ರಮ ಕೈಗೊಳ್ಳತಕ್ಕದ್ದು.
2. ವೇಳಾಪಟ್ಟಿಗನುಸಾರವಾಗಿ ದಿನಾಂಕ:30.11.2019ರಂದು 05 ವರ್ಷಗಳ ಸೇವೆ ಪೂರೈಸಿರುವ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕ ವೃಂದದ ಎಲ್ಲಾ ಸಿಆರ್‌ಪಿ/ಬಿಆರ್‌ಪಿ/ಶಿಕ್ಷಣ ಸಂಯೋಜಕರ ವಿವರಗಳನ್ನು ಆಯಾ ಜಿಲ್ಲಾ ಉಪನಿರ್ದೇಶಕರೂ ಸಹ ಜಿಲ್ಲೆಗಳಲ್ಲಿ ಪ್ರಕಟಿಸುವುದು. ಈ ಬಗ್ಗೆ ಟಿಡಿಎಸ್ ಮಾಹಿತಿಯನ್ನು ಆಧರಿಸಿ ಪಟ್ಟಿಯನ್ನು ಪ್ರಕಟಿಸಲು ಆಯುಕ್ತರ ಕಛೇರಿ ಇ–ಆಡಳಿತ ವಿಭಾಗದ ಸಮನ್ವಯ ಹಾಗೂ ಸಹಕಾರದೊಂದಿಗೆ ಕ್ರಮವಹಿಸತಕ್ಕದ್ದು.
3. ಹಾಗೆ ಪ್ರಕಟಿಸಲಾದ ಕರಡು ಪಟ್ಟಿಯ ಕುರಿತಂತೆ ನಿಗದಿತ ಕಾಲಾವಧಿಯಲ್ಲಿ ಆಕ್ಷೇಪಣೆಗಳನ್ನು ಸ್ವೀಕರಿಸಲು ಆಯಾ ಉಪನಿರ್ದೇಶಕರು ಅಗತ್ಯ ಕ್ರಮಗಳನ್ನು ಕೈಗೊಳ್ಳತಕ್ಕದ್ದು. ಈ ಬಗ್ಗೆ ಶಿಕ್ಷಕ ವಲಯಕ್ಕೆ ವ್ಯಾಪಕವಾಗಿ ಪ್ರಚುರಪಡಿಸತಕ್ಕದ್ದು.
4. ವೇಳಾಪಟ್ಟಿಗನುಸಾರವಾಗಿ ದಿನಾಂಕ:11.12.2019ರಂದು ಒಟ್ಟು ಖಾಲಿ ಹುದ್ದೆಗಳ ಅಂತಿಮ ಪಟ್ಟಿ ಪ್ರಕಟಿಸುವುದು. ಈ ಬಗ್ಗೆ ಟಿಡಿಎಸ್ ಮಾಹಿತಿಯನ್ನು ಆಧರಿಸಿ ಪಟ್ಟಿಯನ್ನು ಪ್ರಕಟಿಸಲು ಆಯುಕ್ತರ ಕಛೇರಿ ಇ–ಆಡಳಿತ ವಿಭಾಗದಿಂದ ಸಹಕಾರವನ್ನು ಪಡೆದುಕೊಳ್ಳತಕ್ಕದ್ದು.
5. ಇತರೆ ಎಲ್ಲಾ ಸೂಚನಾ ಕ್ರಮಗಳಂತೆ ಆಯಾ ವೇಳಾಪಟ್ಟಿಗನುಸಾರ ಸಿದ್ದತಾ ಕಾರ್ಯಗಳನ್ನು ವ್ಯಾಪ್ತಿಯ ಉಪನಿರ್ದೇಶಕರು(ಆಡಳಿತ), ಉಪನಿರ್ದೇಶಕರು(ಅಭಿವೃದ್ಧಿ) ಮತ್ತು ಕ್ಷೇತ್ರಶಿಕ್ಷಣಾಧಿಕಾರಿಗಳು ಸಮನ್ವಯದಲ್ಲಿ ನಿಗದಿತ ಸಮಯದಲ್ಲಿ ಕೈಗೊಳ್ಳತಕ್ಕದ್ದು.

ನಿರ್ದಿಷ್ಟ ಹುದ್ದೆಗಳಿಗೆ ನಿಗದಿಪಡಿಸಿರುವ ದಿನಾಂಕಗಳಲ್ಲಿ ಪರೀಕ್ಷೆಗಳು ನಡೆಯಲಿದ್ದು ಯಾವುದೇ ಬದಲಾವಣೆ ಇರುವುದಿಲ್ಲ. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಿರ್ದಿಷ್ಟ ಹುದ್ದೆಗಳ ಪರೀಕ್ಷೆಗಳ ಕುರಿತಂತೆ ಪೂರ್ವಸಿದ್ದತಾ ಕಾರ್ಯಗಳನ್ನು ಮತ್ತು ಅನುಷ್ಠಾನ ಕಾರ್ಯಗಳನ್ನು ವೇಳಾಪಟ್ಟಿಗನುಸಾರವಾಗಿ ಕೈಗೊಳ್ಳತಕ್ಕದ್ದು.

[ಡಾ॥ ಕೆ.ಜಿ.ಜಗದೀಶ, ಭಾ.ಆ.ಸೇ]
ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ

<u>ಇವರಿಗೆ:-</u>

1. ನಿರ್ದೇಶಕರು[ಪರೀಕ್ಷೆಗಳು], ಕೆ.ಎಸ್.ಇ.ಇ.ಬಿ. ಮಲ್ಲೇಶ್ವರಂ, ಬೆಂಗಳೂರು ಇವರಿಗೆ ಅಗತ್ಯ ಕ್ರಮಕ್ಕಾಗಿ.
2. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರಿಗೆ ಅಗತ್ಯ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಪ್ರಾಂಶುಪಾಲರು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ(ಡಯಟ್) ಅಗತ್ಯ ಕ್ರಮಕ್ಕಾಗಿ.
4. ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ

<u>ಪ್ರತಿಯನ್ನು</u> :-

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ) ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1 ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಆಪ್ತ ಕಾರ್ಯದರ್ಶಿಯವರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
3. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ , ರಾಜ್ಯ ಯೋಜನಾ ನಿರ್ದೇಶಕರ ಕಛೇರಿ ಬೆಂಗಳೂರು.
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲಬರ್ಗಾ, ಇವರಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ . ಇವರಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
6. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳವರಿಗೆ.
7. ನಿರ್ದೇಶಕರು(ಪ್ರೌಢಶಿಕ್ಷಣ), ಆಯುಕ್ತರ ಕಛೇರಿ ಸಾ.ಶಿ.ಇಲಾಖೆ, ಬೆಂಗಳೂರು
8. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ
9. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಹನಿರ್ದೇಶಕರು ಹಾಗೂ ಪದನಿಮಿತ್ತ ವಿಭಾಗೀಯ ಕಾರ್ಯದರ್ಶಿಗಳು ಇವರಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
10. ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು.
11. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳವರಿಗೆ.
12. ಆಯುಕ್ತರ ಆಪ್ತ ಕಾರ್ಯದರ್ಶಿಯವರಿಗೆ ಮಾಹಿತಿಗಾಗಿ.
13. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಘಟಕ, ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು ಇವರಿಗೆ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕ್ರಿಯೆಗೆ ಸಂಬಂಧಪಟ್ಟಂತೆ ಅಗತ್ಯ ತಾಂತ್ರಿಕ ಅಳವಡಿಕೆಗೆ ಕ್ರಮ ಕೈಗೊಳ್ಳಲು ಮತ್ತು ಜ್ಞಾಪನವನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಿದೆ.
14. ಹಿರಿಯ ಸಹಾಯಕ ನಿರ್ದೇಶಕರು, SATS ವಿಭಾಗ, ರಾಜ್ಯ ಯೋಜನಾ ನಿರ್ದೇಶಕರ ಕಛೇರಿ, ಸಮಗ್ರ ಶಿಕ್ಷಣ ಬೆಂಗಳೂರು ಇವರಿಗೆ ಪ್ರಕ್ರಿಯೆಗೆ ಸಂಬಂಧಪಟ್ಟಂತೆ ಇಲಾಖಾ ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಕೆಗೆ ಅಗತ್ಯ ಲಿಂಕ್ ಒದಗಿಸಲು ಮತ್ತು ಇತರೆ ತಾಂತ್ರಿಕ ಕ್ರಮಗಳನ್ನು ಕೈಗೊಳ್ಳಲು ತಿಳಿಸಿದೆ.
15. ಹಿರಿಯ ಸಹಾಯಕ ನಿರ್ದೇಶಕರು ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿಯವರು, ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು ಇವರಿಗೆ ಪತ್ರಿಕಾ ಪ್ರಕಟಣೆ ನೀಡಲು ತಿಳಿಸಿದೆ
16. ಕಛೇರಿ ಪ್ರತಿ.